## 40. ಕೇಂದ್ರದಿಂದ ಅನ್‌ಲಾಕ್ 4.0 ಮಾರ್ಗಸೂಚಿ ಪ್ರಕಟ

ಕೊರೋನಾ ನಿಗ್ರಹಕ್ಕಾಗಿ ಜಾರಿಗೊಳಿಸಲಾಗಿದ್ದ ಲಾಕ್‌ಡೌನ್ ಅನ್ನು ಹಂತಹಂತವಾಗಿ ತೆರವುಗೊಳಿಸುವ ಸಂಬಂಧ ಕೇಂದ್ರ ಸರ್ಕಾರ ಅನ್‌ಲಾಕ್ 4.0 ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದೆ. ಸೆಪ್ಟೆಂಬರ್ 7 ರಿಂದ ಮೆಟ್ರೋ ರೈಲು ಸಂಚಾರ ಆರಂಭಿಸಲು 100 ಜನರ ಮಿತಿಯೊಂದಿಗೆ ಸೆಪ್ಟೆಂಬರ್ 21 ರಿಂದ ಸಾಮಾಜಿಕ ಶೈಕ್ಷಣಿಕ, ಸಾಂಸ್ಕೃತಿಕ, ಧಾರ್ಮಿಕ, ರಾಜಕೀಯ ಮನರಂಜನೆ ಮತ್ತು ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಲು ಅನುಮತಿ ನೀಡಿದೆ. ವಿವಾಹ ಅಂತ್ಯ ಸಂಸ್ಕಾರದಲ್ಲಿ ಪಾಲ್ಗೊಳ್ಳಲು ನಿಗದಿಗೊಳಿಸಿದ್ದ ಅಲ್ಪಜನರ ಮಿತಿಯನ್ನು ಸೆಪ್ಟೆಂಬರ್ 21 ರಿಂದ 100ಕ್ಕೆ ಹೆಚ್ಚಳ ಮಾಡಿ ಕೇಂದ್ರ ಗೃಹ ಸಚಿವಾಲಯ ಮಾರ್ಗಸೂಚಿ ಪ್ರಕಟಿಸಿದೆ.

ಚಿತ್ರಮಂದಿರ, ಈಜುಕೊಳಗಳು, ಬಾರ್, ಕ್ಲಬ್, ಮನರಂಜನಾ ಪಾರ್ಕ್‌ಗಳ ಮೇಲಿನ ನಿರ್ಬಂಧವನ್ನು ಮುಂದುವರಿಸಲಾಗಿದೆ. ಕೊರೋನಾ ಕೇಸ್‌ಗಳು ಹೆಚ್ಚಿರುವ ಕಂಟೈನ್ಮೆಂಟ್ ವಲಯದಲ್ಲಿ ಸೆಪ್ಟೆಂಬರ್–30ರವರೆಗೆ ಲಾಕ್‌ಡೌನ್ ವಿಸ್ತರಿಸಲಾಗಿದೆ. ಕಂಟೈನ್ಮೆಂಟ್ ವಲಯದಿಂದ ಹೊರಗಿರುವ ಪ್ರದೇಶಗಳಲ್ಲಿ ಕೇಂದ್ರ ಸರ್ಕಾರದ ಜೊತೆ ಸಮಾಲೋಚನೆ ನಡೆಸದೆ ರಾಜ್ಯಗಳು ಲಾಕ್‌ಡೌನ್ ಹೇರುವಂತಿಲ್ಲ ಎಂದು ಕಟ್ಟಪ್ಪಣೆ ವಿಧಿಸಿದೆ.

**9–12ನೇ ತರಗತಿ ಮಕ್ಕಳಿಗೆ ಶಾಲೆಗೆ ಹೋಗುವ ಅವಕಾಶ:–**

ಶಾಲಾ–ಕಾಲೇಜುಗಳ ಆರಂಭಕ್ಕೆ ಅನ್‌ಲಾಕ್ 4.0ರಲ್ಲೂ ಕೇಂದ್ರ ಸರ್ಕಾರ ಅನುಮತಿ ನೀಡಿಲ್ಲ. ಆದರೆ ಸೆಪ್ಟೆಂಬರ್ 21 ರಿಂದ ಅನ್ವಯ ಆಗುವಂತೆ 9 ರಿಂದ 12ನೇ ತರಗತಿ ವಿದ್ಯಾರ್ಥಿಗಳು ಕಂಟೈನ್ಮೆಂಟ್ ಪ್ರದೇಶದ ಹೊರಗಿನ ಪ್ರದೇಶದಲ್ಲಿ ಆನ್‌ಲೈನ್ ತರಗತಿಯ ವೇಳೆ ಶಾಲೆಗಳಿಗೆ ಭೇಟಿ ನೀಡಿ ಶಿಕ್ಷಕರಿಂದ ಮಾರ್ಗದರ್ಶನ ಪಡೆದುಕೊಳ್ಳಲು ಅನುಮತಿ ನೀಡಲಾಗಿದೆ. ಶೇ.50ರಷ್ಟು ಶಿಕ್ಷಕರು ಮತ್ತು ಬೋಧಕೇತರ ಸಿಬ್ಬಂದಿ ಆನ್‌ಲೈನ್ ತರಗತಿಗಾಗಿ ಶಾಲೆಗೆ ಬಂದು ಪಾಠ ಮಾಡಲು ಅವಕಾಶ ನೀಡಲಾಗಿದೆ. ಈ ವೇಳೆ ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸುವಂತೆ ತಿಳಿಸಲಾಗಿದೆ.

**ಅಂತರರಾಜ್ಯ ಸಂಚಾರ ನಿರ್ಬಂಧಿಸುವಂತಿಲ್ಲ:** ಜನರ ಅಥವಾ ಸರಕು ಸಾಗಣೆಯ ಅಂತರರಾಜ್ಯ ಸಂಚಾರವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸುವಂತಿಲ್ಲ ಎಂದಿರುವ ಕೇಂದ್ರ ಸರ್ಕಾರ, ಅಂತಹ ಸಂಚಾರಕ್ಕೆ ಯಾವುದೇ ಅನುಮತಿ, ನೋಂದಣಿ ಬೇಕಾಗಿಲ್ಲ ಎಂದು ಸ್ಪಷ್ಟಪಡಿಸಿದೆ. ಇದೇ ವೇಳೆ ಕಂಟೈನ್ಮೆಂಟ್ ಪ್ರದೇಶದ ಹೊರಗೆ ಯಾವ ರಾಜ್ಯವು ಲಾಕ್‌ಡೌನ್ ಮಾಡುವಂತಿಲ್ಲ ಎಂದು ನಿರ್ದೇಶಿಸಿದೆ.

ಆಧಾರ:ಕನ್ನಡ ಪ್ರಭ, ದಿನಾಂಕ:31.08.2020